# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು

## ಸಿಸಿ ಸಂಖ್ಯೆ: 1189/2018

ಪಿರ್ಯಾದುದಾರರು : ನಂಜನಗೂಡು ಗ್ರಾಮಾಂತರ ಠಾಣೆ, ನಂಜನಗೂಡು

ವಿರುದ್ಧ

ಆರೋಪಿಗಳು :
1. ಅಶೋಕ ಬಿನ್ ಶಿವನ್, 21 ವರ್ಷ,
2. ರಾಜ ಬಿನ್ ಬೋರಪ್ಪ, 21 ವರ್ಷ,
3. ಕುಮಾರ ಅಲಿಯಾಸ್ ಕಾಂತಿ ಅಲಿಯಾಸ್ ಕಿಟ್ಟಿ ಬಿನ್ ಮರಿಸ್ವಾಮಪ್ಪ, 20 ವರ್ಷ,
4. ಕಿಟ್ಟಿ ಅಲಿಯಾಸ್ ಕಿಟ್ಟು ಬಿನ್ ಮಹದೇವಪ್ಪ, 20 ವರ್ಷ,

ವಾಸಃ ಹೆಗ್ಗಡಹಳ್ಳಿ ಗ್ರಾಮ, ನಂಜನಗೂಡು ತಾಲ್ಲೂಕು.

*****

## :: ದೋಷಾರೋಪಣೆ ::

*ಶ್ರೀ ರಘುರಾಮ ಎನ್. ಎಸ್.,* ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಮೇಲ್ಕಂಡ ಆರೋಪಿಗಳಾದ ನಿಮ್ಮ ಮೇಲೆ ಈ ಕೆಳಕಂಡಂತೆ ಆರೋಪಗಳನ್ನು ನಿರೂಪಿಸುತ್ತಿದ್ದೇನೆ.

ದಿನಾಂಕ 17.05.2017 ರಂದು ಬೆಳಿಗ್ಗೆ 9.00 ಗಂಟೆ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೋಲಿಸ್ ಠಾಣಾ ವ್ಯಾಪ್ತಿಯಲ್ಲಿರುವ ಹೆಗ್ಗಡಹಳ್ಳಿ ಗ್ರಾಮದ ಬಸ್ ನಿಲ್ದಾಣದ ಹತ್ತಿರ ದಿನಾಂಕ 15.05.2017 ರಂದು ರಾತ್ರಿ ನಡೆದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಡ್ಯಾನ್ಸ್ ಮಾಡುವ ವಿಚಾರದಲ್ಲಿ ಆರೋಪಿತರಾದ ನೀವು ದ್ವೇಷ ಇಟ್ಟುಕೊಂಡು ಚಾಸಾ-1 ರವರನ್ನು ಮುಂದೆ ಹೋಗದಂತೆ ಅಡ್ಡಗಟ್ಟಿ ಕತ್ತಿನ ಪಟ್ಟಿ ಹಿಡಿದು ಅಕ್ರಮವಾಗಿ ತಡೆಯುಂಟು ಮಾಡಿರುವ ಕಾರಣ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ 34 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಎರಡನೆಯದಾಗಿ ಅದೇ ದಿನ, ವೇಳೆ ಹಾ.ಗೂ ಸ್ಥಳದಲ್ಲಿ, ಆರೋಪಿತರು ಸಮಾನ ಉದ್ದೇಶದಿಂದ ಗಲಾಟೆ ಮಾಡಿ, ಚಾಸಾ–1 ರವರಿಗೆ ಬೋಳಿಮಗನೆ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿರುವ ಕಾರಣ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ 34 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಮೂರನೆಯದಾಗಿ ಅದೇ ದಿನ, ವೇಳೆ ಹಾಗೂ ಸ್ಥಳದಲ್ಲಿ, ಆರೋಪಿತರು ಸಮಾನ ಉದ್ದೇಶದಿಂದ ಗಲಾಟೆ ಮಾಡಿ, ಚಾಸಾ–1 ರವರ ತಲೆಯ ಹಿಂಭಾಗಕ್ಕೆ ಹೊಡೆದಿದ್ದು, 2 ಮತ್ತು 3 ನೇ ಆರೋಪಿತರಾದ ನೀವು ಕೈಯಿಂದ ಮೈಕೈಗೆ ಹೊಡೆದು ಕೆಳಕ್ಕೆ ಕೆಡವಿಕೊಂಡು ಕಾಲಿನಿಂದ ಒದ್ದು ನೋವುಂಟು ಮಾಡಿರುವ ಮಾಡಿರುವ ಕಾರಣ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ 34 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ನಾಲ್ಕನೆಯದಾಗಿ ಅದೇ ದಿನ, ವೇಳೆ ಹಾಗೂ ಸ್ಥಳದಲ್ಲಿ, ಆರೋಪಿತರು ಸಮಾನ ಉದ್ದೇಶದಿಂದ ಗಲಾಟೆ ಮಾಡಿ, 4 ನೇ ಆರೋಪಿಯಾದ ನೀವು ಇವರನ್ನು ಬಿಡಬೇಡಿ ಎಷ್ಟು ಖರ್ಚಾದರೂ ಸರಿ ಕೊಲೆ ಮಾಡಿ ಬಿಡಬೇಡಿ ಎಂದು ಕುಮ್ಮಕ್ಕು ನೀಡಿರುವ ಕಾರಣ ಭಾರತೀಯ ದಂಡ ಸಂಹಿತೆ ಕಲಂ 114 ಸಹವಾಚಕ 34 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಐದನೆಯದಾಗಿ ಅದೇ ದಿನ, ವೇಳೆ ಹಾಗೂ ಸ್ಥಳದಲ್ಲಿ, ಆರೋಪಿತರು ಸಮಾನ ಉದ್ದೇಶದಿಂದ ಗಲಾಟೆ ಮಾಡಿ, ಚಾಸಾ–1 ರವರಿಗೆ ಕೊಲೆ ಬೆದರಿಕೆ ಹಾಕಿರುವ ಕಾರಣ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ 34 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಮೇಲ್ಕಂಡ ನಿಮ್ಮ ಮೇಲಿನ ಆರೋಪಣೆಯ ಬಗ್ಗೆ ವಿಚಾರಣೆಯಾಗಲು ಈ ಮೂಲಕ ಆದೇಶಿಸುತ್ತೇನೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆಎಂಎಫ್‌ಸಿ.,
ನಂಜನಗೂಡು

**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು</u>**

**<u>ಸಿಸಿ ಸಂಖ್ಯೆ: 1189/2018</u>**

ಪಿರ್ಯಾದುದಾರರು : ನಂಜನಗೂಡು ಗ್ರಾಮಾಂತರ ಠಾಣೆ, ನಂಜನಗೂಡು

ವಿರುದ್ಧ

ಆರೋಪಿಗಳು :
1. ಅಶೋಕ ಬಿನ್ ಶಿವನ್, 21 ವರ್ಷ,
2. ರಾಜ ಬಿನ್ ಬೋರಪ್ಪ, 21 ವರ್ಷ,
3. ಕುಮಾರ ಅಲಿಯಾಸ್ ಕಾಂತಿ ಅಲಿಯಾಸ್ ಕಿಟ್ಟಿ ಬಿನ್ ಮರಿಸ್ವಾಮಪ್ಪ, 20 ವರ್ಷ,
4. ಕಿಟ್ಟಿ ಅಲಿಯಾಸ್ ಕಿಟ್ಟು ಬಿನ್ ಮಹದೇವಪ್ಪ, 20 ವರ್ಷ,

ವಾಸಃ ಹೆಗ್ಗಡಹಳ್ಳಿ ಗ್ರಾಮ, ನಂಜನಗೂಡು ತಾಲ್ಲೂಕು.

*****

## <u>:: ದೋಷಾರೋಪಣೆ ::</u>

ಪ್ರಶ್ನೆಃ 1– ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೆ ?

ಆರೋಪಿ ಉತ್ತರಃ

ಪ್ರಶ್ನೆಃ 2 ಸದರಿ ಆಪಾದನೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ?

ಆರೋಪಿ ಉತ್ತರಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

ದಿನಾಂಕಃ 03.01.2023

ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆಎಂಎಫ್‌ಸಿ.,
ನಂಜನಗೂಡು